3. ಬಳ್ಳಾರಿ ನಗರದ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಸೊಳ್ಳೆ ನಿಯಂತ್ರಣ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ.

4. ಸಾರ್ವಜನಿಕರಿಗೆ ಈ ರೋಗದ ಬಗ್ಗೆ ಮುಂಜಾಗ್ರತೆ ಕಾರ್ಯಕ್ರಮ ಕೈಗೊಳ್ಳಲು ಆರೋಗ್ಯ ಶಿಕ್ಷಣ ನೀಡಲಾಗಿದೆ.

ಈ) ಇಲ್ಲಾ

ಉ) ಬಳ್ಳಾರಿ ಜಿಲ್ಲೆಯಲ್ಲಿ ಮೆದುಳುಜ್ವರ ರೋಗದ ಬಗ್ಗೆ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಅಧ್ಯಯನ ಮತ್ತು ಸಂಶೋದನಾ ಕಾರ್ಯವನ್ನು ಕೈಗೊಳ್ಳಲು ವೆಕ್ಟರ್ ಕಂಟ್ರೋಲ್ ರೀಸರ್ಚ್ ಸೆಂಟರ್, ಪಾಂಡಿಚೇರಿ ಮತ್ತು ಭಾರತೀಯ ವೈದ್ಯಕೀಯ ಸಂಶೋಧನ ಸಂಸ್ಥೆ (ಐಸಿಎಂಆರ್) ಇವರೊಂದಿಗೆ ಚರ್ಚಿಸಿದೆ, ಮತ್ತು ಇದರ ಬಗ್ಗೆ ಸಂಶೋಧನೆಯನ್ನು ಕೈಗೊಳ್ಳಲು ಒಪ್ಪಿರುತ್ತಾರೆ.

ಬಳ್ಳಾರಿ ಜಿಲ್ಲೆಯಲ್ಲಿ ರಜಾ ದಿನಗಳಂದು ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡುವ ವೈದ್ಯರಿಗೆ ಪ್ರೋತ್ಸಾಹ ಧನ.

756(343) ಶ್ರೀ ಆಲ್ಲಂ ವೀರಭದ್ರಪ್ಪ (ಕುರುಗೋಡು) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕ್ರೇಂದ್ರ ಸರ್ಕಾರದ ನೆರವಿನ ಕಣ್ಣಿನ ಶಸ್ತ್ರ ಚಿಕಿತ್ಸೆ ಯೋಜನೆಯಡಿ ಬಳ್ಳಾರಿ ಜಿಲ್ಲೆಯಲ್ಲಿ ಸರ್ಕಾರಿ ನೇತ್ರ ವೈದ್ಯರು ರಜಾದಿನಗಳಂದೂ ಸಹ ಕಣ್ಣಿನ ಶಸ್ತ್ರ ಚಿಕಿತ್ಸೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ರೀತಿ ರಜಾದಿನಗಳಲ್ಲೂ ಶಸ್ತ್ರ ನೇತ್ರ ಚಿಕಿತ್ಸೆ ನಡೆಸುವ ವೈದ್ಯರಿಗೆ ಪ್ರೋತ್ಸಾಹಧನ ನೀಡಲು ಸರ್ಕಾರ ಆಲೋಚಿಸುತ್ತಿದೆಯೇ?

ಡಾ: ಹೆಚ್.ಸಿ. ಮಹಾದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿದೆ.

ಆ) ಈ ಬಗ್ಗೆ ಕೇಂದ್ರ ಸರ್ಕಾರ ನೀಡಿರುವ ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲ.